ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

**ಕರ್ನಾಟಕ ವಿಧಾನ ಪರಿಷತ್ತು**

ಸೋಮವಾರ, ದಿನಾಂಕ: 02ನೇ ಮಾರ್ಚ್, 2020

ರಾಜ್ಯದಲ್ಲಿ ಮಲೇರಿಯಾ ನಿಯಂತ್ರಣದ ಬಗ್ಗೆ

ಶ್ರೀ ಐವನ್ ಡಿ'ಸೋಜಾ (ನಾಮನಿರ್ದೇಶನ ಹೊಂದಿದವರು) :-

24 (108) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ರಾಜ್ಯದಲ್ಲಿ ಮಲೇರಿಯಾ ನಿಯಂತ್ರಣಕ್ಕೆ ಆರೋಗ್ಯ ಇಲಾಖೆಯಿಂದ ಯಾವ ಯೋಜನೆ ನಿರೂಪಿಸಲಾಗಿದೆ;

(ಆ) 2018-19 ಮತ್ತು 2019-20ನೇ ಸಾಲಿನಲ್ಲಿ ಮಲೇರಿಯಾ ನಿಯಂತ್ರಣಕ್ಕಾಗಿ ಖರ್ಚು ಮಾಡಿದ ಅನುದಾನ ಎಷ್ಟು; (ಜಿಲ್ಲಾವಾರು ವಿವರ ನೀಡುವುದು)

(ಇ) ಮಂಗಳೂರು ಸೇರಿದಂತೆ ಅನೇಕ ಜಿಲ್ಲೆಗಳಲ್ಲಿ ಮಲೇರಿಯಾ ಪ್ರಕರಣ ಹೆಚ್ಚಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಈ ಬಗ್ಗೆ ಸರ್ಕಾರ ಕೈಗೊಂಡ ಕ್ರಮಗಳೇನು;

(ಈ) ಕೇಂದ್ರ ಮತ್ತು ರಾಜ್ಯಗಳಲ್ಲಿ ಮಲೇರಿಯಾ ನಿಯಂತ್ರಣಕ್ಕೆ ಕೈಗೊಂಡಿರುವ ಹೊಸ ಯೋಜನೆಗಳಾವುವು? (ವಿವರ ನೀಡುವುದು)